Government of Karnataka

Deposition Sheet Form No. R.P. 57

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸಗೂರ

ಸಿ.ಸಿ ನಂಬರಃ 11/2025

ಸಿ ಡಬ್ಲ್ಯೂ- 05
ಪಿ ಡಬ್ಲ್ಯೂ- 05

| | |
|---|---|
| ಸಾಕ್ಷಿದಾರರ ಹೆಸರು | ಃ- ಮೌನೇಶ |
| ತಂದೆಯ ಹೆಸರು | ಃ- ಹನುಮಪ್ಪ |
| ವಯಸ್ಸು | ಃ- 22 ವರ್ಷ |
| ಉದ್ಯೋಗ | ಃ- ಚಾಲಕ |
| ವಾಸಸ್ಥಳ | ಃ- ಯರಗೋಡಿ |

**ದಿ.22-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಭೋದಿಸಲಾಯಿತು.**

***ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.***

ಮೃತ ಬಸಪ್ಪ ರವರ ಪರಿಚಯ ಇಲ್ಲ. ಚಾ.ಸಾ-1 ರಿಂದ 4 ಪರಿಚಯ ಇಲ್ಲ. ಆರೋಪಿತರನ್ನು ನೋಡಿಲ್ಲ.

ಸುಮಾರು ಒಂದುವರೆ ವರ್ಷದ ಹಿಂದೆ ಪೋಲಿಸರು ನಮ್ಮ ಊರಿಗೆ ಬಂದಾಗ ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಯಾವ ಕಾರಣಕ್ಕೆ ಎಂದು ನನಗೆ ಗೊತ್ತಿಲ್ಲ. ನಮ್ಮ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ಪೋಟೋ ತೆಗೆದಿಲ್ಲ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದು ಅದನ್ನು ಪಂಚನಾಮೆಯನ್ನು ಈಗಾಗಲೇ ನಿ.ಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-3(ಸಿ) ಎಂದು ಗುರುತಿಸಲಾಯಿತು. ಪೋಟೋವನ್ನು ಈಗಾಗಲೇ ನಿ.ಪಿ-4 ಎಂದು ಗುರುತಿಸಲಾಗಿದೆ. ನಿ.ಪಿ-3 ರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಎಪಿಪಿ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೇಳಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಎಪಿಪಿ ಅವರಿಂದ.**

ದಿನಾಂಕ 02-07-2024 ರಂದು ಬೆಳಿಗ್ಗೆ 10-00 ರಿಂದ 11-00 ವರೆಗೆ ಚಾ.ಸಾ-1 ರವರು ತೋರಿಸಿದ ಮರೆಗೆ ನನ್ನ ಮತ್ತು ಚಾ.ಸಾ-4 ರವರ ಸಮಕ್ಷಮ ಯರಗೋಡಿ ಗ್ರಾಮದ ನಾಗಪ್ಪ

ಗದ್ದಿರವರ ಮನೆಯ ಮುಂದಿನ ರಸ್ತೆಯ ಪಕ್ಕದ ಕಂಬದ ಹತ್ತಿರ ಪೋಲಿಸರು ಪಂಚನಾಮೆ ಮಾಡಿ ಪೋಟೋ ತೆಗೆಯಿಸಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಪೋಲಿಸರ ಹೇಳಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ. ನಿ.ಪಿ-೩ ಮತ್ತು 4 ರಲ್ಲಿರುವ ವಿಷಯ ಗೊತ್ತಿದ್ದರೂ ಸಹ ಆರೋಪಿತರನ್ನು ಶಿಕ್ಷೆಯಿಂದ ತಪ್ಪಿಸಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಶ್ರೀ ಎಮ್.ಎಸ್.ಪಿ ವಕೀಲರಿಂದ : -</u>**

ಏನೂ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)
ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ..
ಲಿಂಗಸಗೂರು.